ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ	:	1454
ಸದಸ್ಯರ ಹೆಸರು	:	ಶ್ರೀ ಗೋವಿಂದ ರಾಜು
ಉತ್ತರಿಸುವ ದಿನಾಂಕ	:	17-03-2021
ಉತ್ತರಿಸುವ ಸಚಿವರು	:	ಸಮಾಜ ಕಲ್ಯಾಣ ಸಚಿವರು.

ಕ್ರ ಸಂ.	ಪ್ರಶ್ನೆ	ಉತ್ತರ
ಅ)	2018-19ನೇ ಸಾಲಿನಲ್ಲಿ ಕಾಲೋನಿ ಅಭಿವೃದ್ಧಿ/ಪ್ರಗತಿ ಕಾಲೋನಿ ಯೋಜನೆಯಡಿಯಲ್ಲಿ ಕಲಬುರಗಿ ಜಿಲ್ಲೆಯ ನಗರ ಪ್ರದೇಶಗಳಲ್ಲಿ ಪರಿಶಿಷ್ಟ ಪಂಗಡದ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಅನುದಾನವನ್ನು ಬಿಡುಗಡೆ ಮಾಡಿದೆಯೇ;	2018-19ನೇ ಸಾಲಿನಲ್ಲಿ ಕಾಲೋನಿ ಅಭಿವೃದ್ಧಿ/ಪ್ರಗತಿ ಕಾಲೋನಿ ಯೋಜನೆಯಡಿಯಲ್ಲಿ ಕಲಬುರಗಿ ಜಿಲ್ಲೆಯ ನಗರ ಪ್ರದೇಶಗಳಲ್ಲಿ ಪರಿಶಿಷ್ಟ ಪಂಗಡದ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ರೂ.600.00 ಲಕ್ಷಗಳನ್ನು ಮಂಜೂರಾತಿ ನೀಡಿ ಮೊದಲನೇ ಕಂತಿನಲ್ಲಿ ರೂ.450.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.
ಆ)	ಹಾಗಿದ್ದಲ್ಲಿ, ಈ ಯೋಜನೆಗೆ ಸರ್ಕಾರ ನಿಗಧಿಪಡಿಸಿದ್ದ ಮೊತ್ತವೆಷ್ಟು ಮತ್ತು ಕಾಮಗಾರಿ ಕೈಗೆತ್ತಿಗೊಳ್ಳಲು ಬಿಡುಗಡೆ ಮಾಡಿರುವ ಮೊತ್ತವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)	
ಇ)	ಸರ್ಕಾರದ ಆದೇಶ ಸಂಖ್ಯೆ:ಸಕಇ 77:ಎಸ್‌ಎಲ್‌ಪಿ:2019 ದಿನಾಂಕ:22.02.2019, ದಿನಾಂಕ:22.02.2019ರ ಆದೇಶ ಸಂಖ್ಯೆ:ಪವಕನಿ:ಪಪಂಉಯೋ:ಸಿಆರ್-01/2018-19 ದಿ:05.11.2020ರ ಆದೇಶದಂತೆ ಮೇಲ್ಕಂಡ ಕಾಲೋನಿಗಳಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಶೇ.75 ರಷ್ಟು ಅನುದಾನವನ್ನು ಜಿಲ್ಲಾಧಿಕಾರಿಗಳು ಹಾಗೂ ಜಂಟಿ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಕಲಬುರಗಿ ಜಿಲ್ಲೆ. ಇವರ ಜಂಟಿ ಖಾತೆಗೆ ಖಜಾನೆ-2ರ ಮೂಲಕ ಪಾವತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಈ)	ಹಾಗಿದ್ದಲ್ಲಿ. ಇದುವರೆವಿಗೂ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳದಿರಲು ಕಾರಣಗಳೇನು;	ಜಿಲ್ಲಾಧಿಕಾರಿಗಳು ಕಲಬುರಗಿ ರವರ ಆದೇಶ ಸಂ/ಜಂ.ನಿ/ಸಕಇಕ/ವಿಘಯೋ/ ಕನಪ್ರ/ಸಿಆರ್/2018-19 ದಿನಾಂಕ:11-07-2019ರಲ್ಲಿ ಕಲಬುರಗಿ ನಗರ ಪ್ರದೇಶದ ವ್ಯಾಪ್ತಿಯಲ್ಲಿ ಪರಿಶಿಷ್ಟ ಪಂಗಡ ಜನರು ವಾಸಿಸುತ್ತಿರುವ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯ ಕಾಮಗಾರಿಗಳನ್ನು ಕೈಗೊಳ್ಳಲು ಕಾರ್ಯನಿರ್ವಾಹಕ ಅಭಿಯಂತರರು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ವಿಭಾಗ ಕಲಬುರಗಿ ರವರು ಸಿದ್ದಪಡಿಸಿರುವ ರೂ.600.00ಲಕ್ಷಗಳ ಅಂದಾಜು ಪಟ್ಟಿಗಳಿಗೆ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುತ್ತಾರೆ.

ಉ)	ಆದೇಶ ಸಂಖ್ಯೆ:ಪವಕನಿ:ಪಪಂಉಯೋ:ಸಿಆರ್-01:2020-21 ದಿನಾಂಕ:05.02.2021 ರಂದು ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯದ ನಿರ್ದೇಶಕರು, ಕಲಬುರಗಿ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರಿಗೆ ಪತ್ರ ಬರೆದು ಮೊದಲನೇ ಕಂತಿನಲ್ಲಿ ಬಿಡುಗಡೆಯಾಗಿರುವ ಅನುದಾನಕ್ಕೆ ಸರ್ಕಾರ ಆದೇಶದನ್ವಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸೂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಊ)	ಸರ್ಕಾರದ ಆದೇಶಗಳು ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ ನಿರ್ದೇಶಕರ ಆದೇಶಗಳನ್ನು ದಿಕ್ಕರಿಸಿರುವ ಕಲಬುರಗಿ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಕರ ಮೇಲೆ ಸರ್ಕಾರ ಯಾವುದೇ ಕ್ರಮಕೈಗೊಳ್ಳದಿರಲು ಕಾರಣಗಳೇನು;	ಕಾಮಗಾರಿ ಪೂರ್ಣಗೊಳಿಸಲಾಗಿದೆ.
ಋ)	ಸರ್ಕಾರ ಈಗಲಾದರೂ ಮೇಲ್ಕಂಡ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯಗಳ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದೇ ಮತ್ತು ತಪ್ಪಿಸಸ್ಥ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ;	ಈ ಹಿನ್ನೆಲೆಯಲ್ಲಿ ವಿಚಾರಣೆ ನಡೆಸಿ ಸದರಿ ಅವಧಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಂಬಂಧಪಟ್ಟ ಅಧಿಕಾರಿಯವರಿಂದ ಸೂಕ್ತ ವಿವರಣೆ ಪಡೆದು ತಪ್ಪಿತಸ್ಥರೆಂದು ಕಂಡುಬಂದ ಪಕ್ಷದಲ್ಲಿ ಸದರಿಯವರ ವಿರುದ್ಧ ಕ್ರಮಜರುಗಿಸಲಾಗುವುದು.
ಎ)	ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಹಾಗೂ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗುವುದೇ? (ವಿವರಗಳನ್ನು ನೀಡುವುದು)	

ಸಕಇ 129 ಎಸ್ಎಲ್‌ಪಿ 2021

(ಬಿ.ಶ್ರೀರಾಮುಲು)
ಸಮಾಜ ಕಲ್ಯಾಣ ಸಚಿವರು